27

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಸ್.ಆರ್. ಕೊಣ್ಣೂರು, ಜಂಟಿ ಕೃಷಿ ನಿರ್ದೇಶಕರು ಬೆಂಗಳೂರು (ಗ್ರಾಮಾಂತರ) ಜಿಲ್ಲೆ ಇವರ ಕರ್ತವ್ಯ ನಿರ್ಲಕ್ಷತೆ ಬಗ್ಗೆ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಕುರಿತು.

ಓದಲಾಗಿದೆ: 1) ಆಯುಕ್ತರು, ಕೃಷಿ ಇಲಾಖೆ ಇವರ ಪ್ರಸ್ತಾವನೆ ದಿನಾಂಕ:16-6-2011

**ಪ್ರಸ್ತಾವನೆ:-**

ಮೇಲೆ (1)ರಲ್ಲಿ ಓದಲಾದ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಶ್ರೀ ಎಸ್.ಆರ್. ಕೊಣ್ಣೂರು, ಜಂಟಿ ಕೃಷಿ ನಿರ್ದೇಶಕರು (ಗ್ರಾಮಾಂತರ) ಜಿಲ್ಲೆ ಇವರು ದಿನಾಂಕ: 12-1-2011 ರಿಂದ ಕಛೇರಿ ಕೆಲಸಗಳಿಗೆ ಹಾಜರಾಗದೇ ಹಾಗೂ ಕೇಂದ್ರ ಕಛೇರಿಗೂ ಮಾಹಿತಿ ನೀಡದೇ ಗೈರು ಹಾಜರಾಗಿದ್ದು, ಸದರಿ ವಿಷಯದಲ್ಲಿ ಕಾರಣ ಕೇಳುವ ನೋಟೀಸ್ ಜಾರಿ ಮಾಡಿದ್ದರೂ ಯಾವುದೇ ಉತ್ತರ ನೀಡಿರುವುದಿಲ್ಲ. ಇದರಿಂದಾಗಿ ಜಿಲ್ಲೆಯಲ್ಲಿ ಇಲಾಖೆಯ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಮತ್ತು ಆಡಳಿತದಲ್ಲಿ ಶೀಘ್ರಗತಿಯಲ್ಲಿ ತೀರ್ಮಾನ ತೆಗೆದುಕೊಳ್ಳುವುದು ಸಾಧ್ಯವಾಗುತ್ತಿಲ್ಲವಾಗುತ್ತಿಲ್ಲ. ಒಬ್ಬ ಜವಾಬ್ದಾರಿಯುತ ಅಧಿಕಾರಿಯಾಗಿ ಈ ರೀತಿಯ ಕರ್ತವ್ಯಚ್ಯುತಿ ಎಸಗುತ್ತಿರುವುದು ಸಮರ್ಥನೀಯವಲ್ಲದ ಕಾರಣ ಸದರಿ ಅಧಿಕಾರಿಯನ್ನು ಅಮಾನತ್ತಿನಲ್ಲಿರಿಸಿ, ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಶ್ರೀ ಎಸ್.ಆರ್. ಕೊಣ್ಣೂರು, ಜಂಟಿ ಕೃಷಿ ನಿರ್ದೇಶಕರು, ಬೆಂಗಳೂರು (ಗ್ರಾಮಾಂತರ) ಜಿಲ್ಲೆ ಇವರು ದಿನಾಂಕ:12-1-2011 ರಿಂದ ಕೆಲಸಕ್ಕೆ ಗೈರು ಹಾಜರಾಗಿರುವುದರಿಂದ ಇಲಾಖೆಯ ಕೆಲಸ ಕಾರ್ಯಗಳಿಗೆ ಮತ್ತು ಯೋಜನೆಗಳ ಅನುಷ್ಠಾನಕ್ಕೆ ತೊಂದರೆ ಆಗಿರುವುದರಿಂದ ಇವರನ್ನು ಅಮಾನತ್ತಿನಲ್ಲಿಡಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಕೃಇ 45 ಕೃಪವಿ 2011
## ಬೆಂಗಳೂರು ದಿನಾಂಕ: 29-8-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎಸ್.ಆರ್. ಕೊಣ್ಣೂರು, ಜಂಟಿ ಕೃಷಿ ನಿರ್ದೇಶಕರು, ಬೆಂಗಳೂರು (ಗ್ರಾಮಾಂತರ) ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ : ಶಿಸ್ತುಕ್ರಮ ಬಾಕಿಯಿರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 10(1) (ಡಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತು ಗೊಳಿಸಿ ಆದೇಶಿಸಿದೆ.

...2.

38

ಸದರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಂಶ ಭತ್ಯೆಗೆ ಅರ್ಹರಿರುತ್ತಾರೆ, ಹಾಗೂ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ) ಬೆಂಗಳೂರು
2) ಆಯುಕ್ತರು ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೆಂಗಳೂರು.
4) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
5) ಸಂಬಂಧಪಟ್ಟ ಅಧಿಕಾರಿಗೆ (ಕೃಷಿ ಆಯುಕ್ತರ ಮೂಲಕ)
6) ಸರ್ಕಾರದ ಕಾರ್ಯದರ್ಶಿಗಳು ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
7) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
8) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
9) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು